# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 625 |
| ಸದಸ್ಯರ ಹೆಸರು | : | ಶ್ರೀಮತಿ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 11.12.2023 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಿದ್ಯಾ ವಿಕಾಸ ಯೋಜನೆಯಡಿ 2021-22 ಹಾಗೂ 2022-23ನೇ ಸಾಲಿನಲ್ಲಿ ಪೂರೈಸಲಾದ ಸಮವಸ್ತ್ರ ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. ಬಂದಿದೆ. |
| ಆ) | ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಂಡಿದೆ; ಸಮವಸ್ತ್ರವನ್ನು ಪೂರೈಸಲು ಯಾವ ಸಂಸ್ಥೆಗಳಿಗೆ ವಹಿಸಲಾಗಿದೆ; | ಗುಣಮಟ್ಟ ವಿಚಲನೆ ಮಾಡಿದ ಸಂಸ್ಥೆಗಳಾದ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ರಾಜ್ಯ ಜವಳಿ ಮೂಲ ಸೌಲಭ್ಯ ಅಭಿವೃದ್ಧಿ ನಿಗಮ ಸಂಸ್ಥೆಗಳ ಅಧಿಕಾರಿಗಳ ವಿರುದ್ಧ ಸಂಬಂಧಿಸಿದ ಇಲಾಖೆಯಲ್ಲಿ ನಿಯಮಾನುಸಾರ ಶಿಸ್ತುಕ್ರಮ ಕೈಗೊಳ್ಳಲಾಗುತ್ತಿದೆ.<br>ಕಳಪೆ ಗುಣಮಟ್ಟ ಸರಬರಾಜು ಮಾಡಿದ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ರಾಜ್ಯ ಜವಳಿ ಮೂಲ ಸೌಲಭ್ಯ ಅಭಿವೃದ್ಧಿ ನಿಗಮ ಸಂಸ್ಥೆಗಳಿಗೆ ಗುಣಮಟ್ಟದ ಸಮವಸ್ತ್ರಗಳನ್ನು ಮರುಸರಬರಾಜು ಮಾಡಲು ಸೂಚನೆ ನೀಡಲಾಗಿದೆ. |
| ಇ) | ಮೇಲ್ಕಂಡ ಸಾಲಿನಲ್ಲಿ ಈ ಯೋಜನೆಗೆ ನಿಗದಿಪಡಿಸಿದ ಅನುದಾನದ ಮೊತ್ತವೆಷ್ಟು, | (see table below) |

| | ಮೊದಲನೇ ಜೊತೆ | ಎರಡನೇ ಜೊತೆ |
|---|---|---|
| 2021-22 | 79.60 ಕೋಟಿ | 91.85 ಕೋಟಿ (2022- 23 ಸಾಲಿನಲ್ಲಿ ವಿತರಿಸಲಾಗಿದೆ) |
| 2022-23 | 98.72 ಕೋಟಿ | 73.66 ಕೋಟಿ (2023- 24ನೇ ಸಾಲಿನಲ್ಲಿ ವಿತರಿಸಲಾಗಿದೆ) |

| | | |
|---|---|---|
| ಈ) | ನೊಂದಾಯಿತ ನೇಕಾರ ಸಮುದಾಯಕ್ಕೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ವಿದ್ಯಾ ವಿಕಾಸ ಯೋಜನೆ ಪ್ರಾರಂಭಗೊಂಡಿರುವುದು ನಿಜವೇ; ಹಾಗಿದ್ದಲ್ಲಿ, ನೇಕಾರರನ್ನು ಬಿಟ್ಟು ಕೇಂದ್ರೀಯ ಭಂಡಾರದ ಮೂಲಕ ಮಧ್ಯವರ್ತಿಗಳು ಕಳಪೆ ಸಮವಸ್ತ್ರ ಪೂರೈಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಶಿಕ್ಷಣವನ್ನು ಸಾರ್ವತ್ರಿಕರಣಗೊಳಿಸುವ ಉದ್ದೇಶದಿಂದ ಎಲ್ಲಾ ಮಕ್ಕಳು ಶಾಲೆಗೆ ದಾಖಲಾಗಿ ನಿರಂತರವಾಗಿಶಾಲೆಗೆ ಹಾಜರಾಗಿ ಕಲಿಕೆಯಲ್ಲಿ ತೊಡಗಿಸಿಕೊಳ್ಳುವ ಉದ್ದೇಶದಿಂದ ವಿದ್ಯಾವಿಕಾಸ ಯೋಜನೆಯನ್ನು ಪ್ರಾರಂಭಿಸಿ ಅನುಷ್ಠಾನಗೊಳಿಸಲಾಗುತ್ತಿದೆ.<br><br>ಕೈಮಗ್ಗ ನೇಕಾರರ ಹಿತದೃಷ್ಟಿಯಿಂದ ವಿದ್ಯಾವಿಕಾಸ ಯೋಜನೆ ಅಡಿಯಲ್ಲಿ ಉಚಿತ ಸಮವಸ್ತ್ರ ವಿತರಣೆಯನ್ನು ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತ ಸಂಸ್ಥೆಗೆ ನೇಕಾರರು ಸ್ವತಃ ತಯಾರು ಮಾಡಬಹುದಾದಂತಹ ಬಟ್ಟೆಯ ಪ್ರಮಾಣಕ್ಕೆ ಅನುಗುಣವಾಗಿ ಸರಬರಾಜಿಗೆ ನಿರಂತರವಾಗಿ ಕಾರ್ಯದೇಶವನ್ನು ನೀಡಲಾಗುತ್ತಿದೆ ಹಾಗೂ ಸರಬರಾಜು ಮಾಡಲಾದ ಬಟ್ಟೆಯ ಗುಣಮಟ್ಟವನ್ನು ಪರಿಶೀಲಿಸಲಾಗುತ್ತಿದೆ. ಆದರೆ, ಕೆ.ಹೆಚ್.ಡಿ.ಸಿ ಸಂಸ್ಥೆ ವತಿಯಿಂದ ಖಾಸಗಿ ಸಂಸ್ಥೆಗಳಿಗೆ ಹೊರಗುತ್ತಿಗೆ ನೀಡಲಾದ ಹಿನ್ನೆಲೆಯಲ್ಲಿ 2021-22ನೇ ಸಾಲಿನ 2ನೇ ಜೊತೆ ಸಮವಸ್ತ್ರ ಬಟ್ಟೆಗಳ ಗುಣಮಟ್ಟ ವಿಚಲನೆಯ ಬಗ್ಗೆ ಕಂಡಿಕೆ (ಅ) ರಲ್ಲಿ ವಿವರಿಸಿರುವಂತೆ ಅಗತ್ಯ ಶಿಸ್ತು ಕ್ರಮಕೈಗೊಳ್ಳಲಾಗಿದೆ. |

**ಇಪಿ 115 ಎಂಪಿಇ 2023**

**(ಎಸ್.ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಸಚಿವರು**